ಈ) ಈ ಕೊರತೆ ನಿವಾರಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಹೌದು.

ಆ) ಕೊಠಡಿಗಳ ನಿರ್ಮಾಣಕ್ಕೆ ಅಗತ್ಯವಾದ ಪ್ರಸ್ತಾವನೆಯನ್ನು ತಯಾರಿಸಿ, ಲೋಕೋಪಯೋಗಿ ಇಲಾಖೆಯಿಂದ ಅನುಮೋದನೆ ಪಡೆದು ಸಲ್ಲಿಸಲು ಪ್ರಾಚಾರ್ಯರಿಗೆ ತಿಳಿಸಲಾಗಿದೆ. ಅವರಿಂದ ಪ್ರಸ್ತಾವನೆ ಬಂದ ಕೂಡಲೇ ಮಂಜೂರಾತಿಗೆ ಕ್ರಮ ಜರುಗಿಸಲಾಗುವುದು ಹಾಗೂ ಖಾಲಿಯಿರುವ ಉಪನ್ಯಾಸಕರ ಹುದ್ದೆಗಳನ್ನು ಲೋಕಸೇವಾ ಆಯೋಗದಿಂದ ಆಯ್ಕೆ ಆಗಿರುವ ಅಭ್ಯರ್ಥಿಗಳಿಂದ ತುಂಬಲಾಗುವುದು.

ದಿನಾಂಕ 18.3.1997ರ ಚುಕ್ಕೆ ಗುರುತಿನ ಹಾಗೂ ಚುಕ್ಕೆ ಗುರುತಿಲ್ಲದ ಪ್ರಶ್ನೋತ್ತರಗಳು.

ನೊಣವಿನಕೆರೆ ಸಬ್‌ಸ್ಟೇಷನ್ ಪ್ರಾರಂಭ.

122 - ಶ್ರೀ ಬಿ. ನಂಜಾಮರಿ (ತಿಪಟೂರು) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೊಣವಿನಕೆರೆ ಸಬ್‌ಸ್ಟೇಷನ್ ಪ್ರಾರಂಭ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಯಾವಾಗ ಪ್ರಾರಂಭ ಮಾಡಲಾಗುವುದು?

ಇ) ಹೊನವಳ್ಳಿ ಸಬ್‌ಸ್ಟೇಷನ್ ಹೊಸದಾಗಿ ಪ್ರಾರಂಭಿಸಿದ ಬಗ್ಗೆ ಸರ್ಕಾರದವರ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ ಯಾವಾಗ ಕೆಲಸವನ್ನು ಪ್ರಾರಂಭಿಸಲಾಗುವುದು?

ಶ್ರೀ ಶರಣಬಸಪ್ಪ ದರ್ಶನಾಪುರ (ಇಂಧನ ರಾಜ್ಯ ಸಚಿವರು) :

ಅ) ಹೌದು.

ಆ) ಈ ಸ್ಟೇಷನ್ನನ್ನು, ಏಪ್ರಿಲ್97ರ ಅಂತ್ಯದ ವೇಳೆಗೆ ಚಾಲನೆಗೊಳಿಸಲು ಎಲ್ಲಾ ಪ್ರಯತ್ನಗಳನ್ನು ಮಾಡಲಾಗುತ್ತಿದೆ.

ಇ) ತಿಪಟೂರು ತಾಲ್ಲೂಕಿನ ಹೊನ್ನವಳ್ಳಿಯಲ್ಲಿ ಒಂದು 110:11 ಕೆ.ವಿ ಸಬ್‌ಸ್ಟೇಷನ್ನನ್ನು ಸ್ಥಾಪಿಸುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ. ವಿವರವಾದ ಪರಿಶೀಲನೆಯ ನಂತರ ಪ್ರಸ್ತಾವನೆಯನ್ನು ಮಂಡಳಿಯ ತಾಂತ್ರಿಕ ಸಮಿತಿಯ ಮುಂದೆ ತೀರ್ಮಾನಕ್ಕಾಗಿ ಮಂಡಿಸಲಾಗುವುದು.

[illegible]ಮ ಸಮುದ್ರದ 3ನೇ ಹಂತದ ಕಾಮಗಾರಿ

124 - ಶ್ರೀ ಬಿ. ಶಿವರಾಮು (ಗಂಡಸಿ) : ಮಾನ್ಯ ಬೃಹತ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?